# ಅಂಗನವಾಡಿಯಲ್ಲಿ ಕಾರ್ಯಕರ್ತೆ, ಸಹಾಯಕಿ ಹುದ್ದೆ




ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ರಾಜ್ಯದಾದ್ಯಂತ ಇರುವ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ ಮಾಡಿದೆ. ಈ ಹುದ್ದೆಗೆ ಅರ್ಜಿ ಸಲ್ಲಿಸಲು ಆಸಕ್ತಿ ಹೊಂದಿರುವ ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ, ಪಿಯುಸಿ ವಿದ್ಯಾರ್ಹತೆಯನ್ನು ಹೊಂದಿರಬೇಕು. ಕನಿಷ್ಠ 19 ವರ್ಷದವರಾಗಿರಬೇಕು. ಹುದ್ದೆಗಳಿಗೆ ಅನುಗುಣವಾಗಿ ಗೌರವಧನ ನೀಡಲಾಗುತ್ತದೆ. ಶೀಘ್ರದಲ್ಲಿ ವಿಸ್ತೃತ ಅಧಿಸೂಚನೆಯನ್ನು ಬಿಡುಗಡೆ ಮಾಡಲಿದೆ. ಆಸಕ್ತ ಅಭ್ಯರ್ಥಿಗಳು ಅಧಿಸೂಚನೆಯ ಅನುಸಾರ ಜಿಲ್ಲಾ ಅಂಗನವಾಡಿ ಕೇಂದ್ರಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

## ಹುದ್ದೆಗಳ ವಿವರ

| | |
|---|---|
| ಅಂಗನವಾಡಿ ಕಾರ್ಯಕರ್ತೆ | 1500 |
| ಅಂಗನವಾಡಿ ಸಹಾಯಕಿ | 1000 |

ಅಧಿಸೂಚನೆಗಾಗಿ: tinyurl.com/bdff96n

**ವಿದ್ಯಾರ್ಹತೆ :** ಕಾರ್ಯಕರ್ತೆ ಹುದ್ದೆಗೆ ಪಿಯುಸಿ ಪೂರ್ಣಗೊಳಿಸಿರಬೇಕು. ಕನ್ನಡ ವಿಷಯ ಪ್ರಥಮ ಅಥವಾ ದ್ವಿತೀಯ ಭಾಷೆ ಆಗಿ ಓದಿರಬೇಕು. ಸರ್ಕಾರದ ಅಂಗೀಕೃತ ಸಂಸ್ಥೆಯಿಂದ ಡಿಎಸ್‌ಇಆರ್‌ಟಿಯಿಂದ ಇಸಿಸಿಇ ಡಿಪ್ಲೊಮಾ ಕೋರ್ಸ್, ಜೆಓಸಿ ಕೋರ್ಸ್, ಎನ್‌ಟಿಟಿ ಕೋರ್ಸ್ ಅಥವಾ ಅಂಗನವಾಡಿ ಚಟುವಟಿಕೆಗೆ ಸಂಬಂಧಿಸಿದಂತೆ ಡಿಪ್ಲೊಮಾ ನ್ಯೂಟ್ರಿಷಿಯನ್, ಹೋಮ್ ಸೈನ್ಸ್ ಪ್ರಮಾಣ ಪತ್ರ, ನರ್ಸರಿ ಅಥವಾ ಪೂರ್ವ ಪ್ರಾಥಮಿಕ ತರಬೇತಿ ಪಡೆದ ಪ್ರಮಾಣ ಪತ್ರ ಹೊಂದಿದವರಿಗೆ ಆದ್ಯತೆ ಮತ್ತು ಐದು ಅಂಕ ಬೋನಸ್ ನೀಡಲಾಗುವುದು. ಸಹಾಯಕಿ ಹುದ್ದೆಗೆ ಎಸ್‌ಎಸ್‌ಎಲ್‌ಸಿ ವಿದ್ಯಾರ್ಹತೆಯನ್ನು ಪೂರ್ಣಗೊಳಿಸಿರಬೇಕು.

**ವಯೋಮಿತಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನೇಮಕಾತಿ ಅಧಿಸೂಚನೆಯ ಪ್ರಕಾರ, ಅಭ್ಯರ್ಥಿಯು ಕನಿಷ್ಠ 19 ವರ್ಷದಿಂದ ಗರಿಷ್ಠ 35 ವರ್ಷದೊಳಗಿರಬೇಕು. ಅಂಗವಿಕಲ ಅಭ್ಯರ್ಥಿಗಳಿಗೆ 10 ವರ್ಷ ವಯೋಸಡಿಲಿಕೆ ಅನ್ವಯವಾಗಲಿದೆ.

**ಆಯ್ಕೆ ಪ್ರಕ್ರಿಯೆ:** ಅಭ್ಯರ್ಥಿಗಳನ್ನು ಹುದ್ದೆಗೆ ವಿದ್ಯಾರ್ಹತೆಯಲ್ಲಿ ಪಡೆದ ಅಂಕ ಮತ್ತು ಬೋನಸ್ ಅಂಕಗಳನ್ನು ಒಳಗೊಂಡಂತೆ ಪಡೆದ ಒಟ್ಟು ಅಂಕ ಮತ್ತು ಮೆರಿಟ್ ಪಟ್ಟಿ ಆಧರಿಸಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ.

**ಅರ್ಜಿ ಸಲ್ಲಿಕೆ:** ಅರ್ಹ ಅಭ್ಯರ್ಥಿಗಳು karnemakaone.kar.nic.in ವೆಬ್‌ಸೈಟ್‌ಗೆ ಭೇಟಿ ನೀಡುವ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ಮುನ್ನ ಅಭ್ಯರ್ಥಿಗಳು ಜನನ ಪ್ರಮಾಣ ಪತ್ರ/ಜನ್ಮ ದಿನಾಂಕ ಇರುವ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ನಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ, ತಹಸೀಲ್ದಾರ್/ಉಪ ತಹಸೀಲ್ದಾರ್‌ರಿಂದ ಪಡೆದ 3 ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ ಸೇರಿ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು.

# ಅಂಗನವಾಡಿ: ಅರ್ಜಿ ಆಹ್ವಾನ

ಉತ್ತರಕನ್ನಡ ಜಿಲ್ಲೆಯ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ವಿವಿಧ ಕಾರಣಗಳಿಂದಾಗಿ ಖಾಲಿಯಾಗಿರುವ ಅಂಗನವಾಡಿ ಕಾರ್ಯಕರ್ತೆ, ಅಂಗನವಾಡಿ ಸಹಾಯಕಿಯರ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಮಹಿಳೆಯರು karnemakaone.kar.nic.in/abcd/ ಮೂಲಕ ಏ.4ರೊಳಗಾಗಿ ಅರ್ಜಿ ಸಲ್ಲಿಸಬಹುದು. ಅಂಕೋಲಾ ತಾಲೂಕಿನಲ್ಲಿ ನಾಲ್ಕು ಅಂಗನವಾಡಿ ಕಾರ್ಯಕರ್ತೆ ಹಾಗೂ 21 ಸಹಾಯಕಿ, ಭಟ್ಕಳದಲ್ಲಿ ಒಂಬತ್ತು ಅಂಗನವಾಡಿ ಕಾರ್ಯಕರ್ತೆ, 21 ಸಹಾಯಕಿ, ದಾಂಡೇಲಿಯಲ್ಲಿ ನಾಲ್ಕು ಅಂಗನವಾಡಿ ಕಾರ್ಯಕರ್ತೆ ಹಾಗೂ 16 ಸಹಾಯಕಿ, ಹೊನ್ನಾವರದಲ್ಲಿ ನಾಲ್ಕು ಅಂಗನವಾಡಿ ಕಾರ್ಯಕರ್ತೆ, 44 ಸಹಾಯಕಿ, ಕಾರವಾರದಲ್ಲಿ ಮೂರು ಅಂಗನವಾಡಿ ಕಾರ್ಯಕರ್ತ ಹಾಗೂ 17 ಸಹಾಯಕಿ 17, ಕುಮಟಾದಲ್ಲಿ ಐದು ಅಂಗನವಾಡಿ ಕಾರ್ಯಕರ್ತೆ ಹಾಗೂ 37 ಸಹಾಯಕಿ, ಮುಂಡಗೋಡದಲ್ಲಿ ಒಂಬತ್ತು ಅಂಗನವಾಡಿ ಕಾರ್ಯಕರ್ತೆ ಹಾಗೂ 39 ಸಹಾಯಕಿ, ಸಿದ್ದಾಪುರದಲ್ಲಿ 12 ಅಂಗನವಾಡಿ ಕಾರ್ಯಕರ್ತೆ ಹಾಗೂ 32 ಸಹಾಯಕಿ, ಶಿರಸಿಯಲ್ಲಿ 24 ಅಂಗನವಾಡಿ ಕಾರ್ಯಕರ್ತೆ ಹಾಗೂ 69 ಸಹಾಯಕಿ, ಜೋಯಿಡಾದಲ್ಲಿ 20 ಅಂಗನವಾಡಿ ಕಾರ್ಯಕರ್ತೆ ಹಾಗೂ 34 ಸಹಾಯಕಿ, ಯಲ್ಲಾಪುರದಲ್ಲಿ ಎಂಟು ಅಂಗನವಾಡಿ ಕಾರ್ಯಕರ್ತೆ ಹಾಗೂ 23 ಸಹಾಯಕಿ, ಹಳಿಯಾಳದಲ್ಲಿ 13 ಅಂಗನವಾಡಿ ಕಾರ್ಯಕರ್ತೆ ಹಾಗೂ 23 ಸಹಾಯಕಿ ಹುದ್ದೆಗಳು ಖಾಲಿ ಇದ್ದು ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.